**Government of Karnataka**
**Directorate of Health and Family Welfare Services, Ananda Rao Circle, Bangalore-9.**
Phone number 080-22870943 e-Mail- director-hfws@karnataka.gov.in

**NO:** DIR/PA/169/2020-21 Dated: 06-10-2020

**Sub:** Testing of persons for Covid-19

****

Timely testing of the persons who are suspected to be infected with Covid-19 virus is one of the fundamental principles to avoid the spread of virus and break the chain of transmission. Effective and early testing helps in saving lives and bring down case fatality rates. The State Government has specified the persons who need to be tested by way of circulars from time to time. It includes primary & secondary contacts of Covid-positive individual, ILI & SARI patients, staff and health care workers engaged in Covid treatment, persons in containment / buffer zones, or any persons identified by the health staff to be at risk of Covid-19 or suspected of Covid-19 etc. It has come to notice that certain individuals are refusing to get tested and thus hampering the efforts to stop the transmission of Covid-virus. The timely testing will only help the family members, co-workers etc. of Covid positive patient to identify disease early and go for treatment.

Therefore, invoking section (4) of "The Karnataka Epidemic Diseases Ordinance`2020, following order is passed.

## ORDER

All individuals who are identified for Covid-19 test by the government (as explained above) shall get tested so that spread of disease can be contained and lives can be saved.

OMPatil

**(Dr. Om Prakash Patil)**
**Director**
**Health and Family Welfare Family**

**Copy to,**

1. The Deputy Commissioners, All Districts.
2. The Chief Executive officers, Zilla Panchayath, All Districts.

3. The District Health Officers, All Districts.
4. The District Surgeon, All District.
5. Chief Medical Officer, Public Health, BBMP, Bangalore.
6. The Heads of Private Health Facilities, All Districts.

**Copy submitted for kind information to:**

1. The Additional Chief Secretary, Dept. Of Health & F Welfare, Vikasa soudha, Bangalore.
2. The Commissioner, Health & Family Welfare Services, Bangalore.
3. The Mission Director – National Health Mission, Bangalore.

**ಕರ್ನಾಟಕ ಸರ್ಕಾರ**

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಆನಂದರಾವ್‌ವೃತ್ತ, ಬೆಂಗಳೂರು-9**

ದೂರವಾಣಿ ಸಂಖ್ಯೆ: +91-80-22870943, ಮಿಂಚ್ ಅಂಚೆ: director-hfws@karnataka.gov.in

**ಸಂಖ್ಯೆ: ಆಕುಕನಿ/ಆಪ್ತ/ 169/2020-21** **ದಿನಾಂಕ: 06/10/2020**

ವಿಷಯ: ವ್ಯಕ್ತಿಗಳನ್ನು ಕೋವಿಡ್-19 ಪರೀಕ್ಷೆಗೆ ಒಳಪಡಿಸುವ ಬಗ್ಗೆ.

ರೋಗ ಹರಡುವುದನ್ನು ನಿಯಂತ್ರಿಸಲು ಮತ್ತು ರೋಗ ವ್ಯಾಪಿಸುವ ಸರಪಳಿಯನ್ನು ಬೇರ್ಪಡಿಸಲು, ಕೋವಿಡ್-19 ರೋಗದ ಶಂಕಿತ ವ್ಯಕ್ತಿಗಳು ಹಾಗೂ ಕೋವಿಡ್-19 ಸೋಂಕಿಗೆ ತುತ್ತಾದ ವ್ಯಕ್ತಿಗಳನ್ನು ಸಕಾಲದಲ್ಲಿ ಗುರುತಿಸುವುದು ಮೂಲಭೂತ ತತ್ವಗಳಲ್ಲಿ ಒಂದಾಗಿದೆ. ಪರಿಣಾಮಕಾರಿ ಹಾಗೂ ಶೀಘ್ರ ತಪಾಸಣೆಯು ಜೀವಗಳನ್ನು ಉಳಿಸುವಲ್ಲಿ ಹಾಗೂ ಮರಣದ ಪ್ರಮಾಣ ದರವನ್ನು ತಗ್ಗಿಸಲು ಸಹಾಯಕವಾಗಲಿದೆ. ರಾಜ್ಯ ಸರ್ಕಾರವು ಯಾವ-ಯಾವ ವ್ಯಕ್ತಿಗಳಿಗೆ ಪರೀಕ್ಷೆಯ ಅಗತ್ಯವಿದೆ ಎಂಬುದನ್ನು ಮನವರಿಕೆ ಮಾಡಲು ಈಗಾಗಲೇ ಕಾಲ-ಕಾಲಕ್ಕೆ ಹಲವಾರು ಮಾರ್ಗಸೂಚಿಗಳನ್ನು ಹೊರಡಿಸಿದೆ. ಕೋವಿಡ್ ಸೋಂಕಿತರ ಸಂಪರ್ಕಕ್ಕೆ ಒಳಗಾದ ಪ್ರಾಥಮಿಕ ಹಾಗೂ ದ್ವಿತೀಯ ಸಂಪರ್ಕಿಗಳು ಸೇರಿದಂತೆ ಜ್ವರದ ಲಕ್ಷಣವಿರುವ ವ್ಯಕ್ತಿಗಳು (ILI) - ಉಸಿರಾಟ ಸಂಬಂಧಿ ತೊಂದರೆಗಳಿಂದ ಬಳಲುತ್ತಿರುವ (SARI) ರೋಗಿಗಳು, ಕೋವಿಡ್-19 ಚಿಕಿತ್ಸೆಯಲ್ಲಿ ತೊಡಗಿರುವ ಸಿಬ್ಬಂದಿಗಳು ಮತ್ತು ಆರೋಗ್ಯ ಸೇವಾ ಕ್ಷೇತ್ರದ ಕಾರ್ಯಕರ್ತರು, ಕಂಟೈನ್‌ಮೆಂಟ್/ಬಫರ್ ವಲಯದಲ್ಲಿನ ವ್ಯಕ್ತಿಗಳು, ಅಥವಾ ಆರೋಗ್ಯ ಸಿಬ್ಬಂದಿಯಿಂದ ಗುರುತಿಸಲ್ಪಟ್ಟ ಯಾವುದೇ ವ್ಯಕ್ತಿ ಅಥವಾ ಕೋವಿಡ್-19 ಶಂಕಿತ ವ್ಯಕ್ತಿಗಳು ಸೇರಿದಂತೆ ಇತರ ವ್ಯಕ್ತಿಗಳಿಗೆ ಕೋವಿಡ್-19 ಸೋಂಕು ತಗಲುವ ಅಪಾಯವಿರುತ್ತದೆ.

ಈಗಾಗಲೇ ಸರ್ಕಾರದ ಗಮನಕ್ಕೆ ಬಂದಿರುವಂತೆ, ಕೆಲವು ವ್ಯಕ್ತಿಗಳು ಕೋವಿಡ್-19 ಪರೀಕ್ಷೆಗೊಳಪಡಲು ನಿರಾಕರಿಸುತ್ತಿರುವುದು ಕೋವಿಡ್-19 ಸೋಂಕಿನ ನಿಯಂತ್ರಣಕ್ಕೆ ಸರ್ಕಾರವು ಕೈಗೊಂಡಿರುವ ಪ್ರಯತ್ನಕ್ಕೆ ತೀವ್ರ ಹಿನ್ನಡೆಯಾಗಿರುತ್ತದೆ. ಸರಿಯಾದ ಸಮಯದಲ್ಲಿ ಸೋಂಕನ್ನು ಪತ್ತೆ ಹಚ್ಚುವುದರಿಂದ ಮಾತ್ರ ಕೋವಿಡ್ ಸೋಂಕಿತ ವ್ಯಕ್ತಿಯ ಕುಟುಂಬದ ಸದಸ್ಯರು ಮತ್ತು ಆತನ ಸಹೋದ್ಯೋಗಿಗಳಿಗೆ ಸಹಾಯವಾಗಲಿದ್ದು, ಸೋಂಕನ್ನು ಪತ್ತೆ ಹಚ್ಚಲು ಮತ್ತು ಸೋಂಕಿತರನ್ನು ಹೆಚ್ಚಿನ ಚಿಕಿತ್ಸೆಗೊಳಪಡಿಸಲು ಸಹಕಾರಿಯಾಗಲಿದೆ. ಆದ್ದರಿಂದ ಸೆಕ್ಷನ್ (4) ಕರ್ನಾಟಕ ಸಾಂಕ್ರಮಿಕ ರೋಗಗಳ ಸುಗ್ರೀವಾಜ್ಞೆ 2020 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

**ಆದೇಶ**

ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಯ ಪ್ರಕಾರ ಯಾವ ವ್ಯಕ್ತಿಗಳನ್ನು ಕೋವಿಡ್-19 ಪರೀಕ್ಷೆಗೊಳಪಡಿಲು ತಿಳಿಸಲಾಗಿದೆಯೋ ಅಂತಹ ಎಲ್ಲಾ ವ್ಯಕ್ತಿಗಳು ಕಡ್ಡಾಯವಾಗಿ ಪರೀಕ್ಷೆಗೊಳಪಡತಕ್ಕದ್ದು. ಅದರಿಂದಾಗಿ ಕೋವಿಡ್-19 ಸೋಂಕನ್ನು ನಿಯಂತ್ರಿಸಬಹುದಾಗಿ ಮತ್ತು ಅಮೂಲ್ಯ ಜೀವಗಳನ್ನು ಉಳಿಸಬಹುದಾಗಿದೆ.

(ಓಂ ಪ್ರಕಾಶ್ ಪಾಟೀಲ್)
ನಿರ್ದೇಶಕರು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು.

**ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ:**

1. ಎಲ್ಲಾ ಜಿಲ್ಲಾಧಿಕಾರಿಗಳು.
2. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
3. ಮುಖ್ಯ ಆರೋಗ್ಯ ಅಧಿಕಾರಿಗಳು, ಸಾರ್ವಜನಿಕ ಆರೋಗ್ಯ, ಬಿಬಿಎಂಪಿ, ಬೆಂಗಳೂರು.

4. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು.
5. ಎಲ್ಲಾ ಜಿಲ್ಲಾ ಶಸ್ತ್ರಚಿಕಿತ್ಸಕರು.
6. ಎಲ್ಲಾ ಜಿಲ್ಲೆಯ ಖಾಸಗಿ ಆರೋಗ್ಯ ಸಂಸ್ಥೆಯ ಮುಖ್ಯಸ್ಥರು.

**ಪ್ರತಿಯನ್ನು:**

1. ಮಾನ್ಯ ಸರ್ಕಾರ ಪ್ರಧಾನ ಕಾರ್ಯದರ್ಶಿಗಳು, ಆಕುಕ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.
2. ಮಾನ್ಯ ಆಯುಕ್ತರು, ಆಕುಕ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.
3. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.